**3ನೇ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ, ಹಾಸನ**

**ಎಸ್.ಸಿ.ನಂಃ 263/ 2023**

**ಚಾಸಾ-6, ಪ್ರಾಸಾ-5**

| | | |
|---|---|---|
| ಸಾಕ್ಷಿದಾರರ ಹೆಸರು | : | ಶ್ವೇತ |
| ಗಂಡನ ಹೆಸರು | : | ರವಿ |
| ವಯಸ್ಸು | : | 30 ವರ್ಷ |
| ಉದ್ಯೋಗ | : | ಗೃಹಿಣಿ |
| ವಾಸಸ್ಥಳ | : | ಹಾಸನ |

**ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಿದ ದಿನಾಂಕಃ 11.02.2025.**

**ಮುಖ್ಯ ವಿಚಾರಣೆಃ ಸರ್ಕಾರಿ ಅಭಿಯೋಜಕರಿಂದಃ**

1. ನನ್ನ ಯಜಮಾನರು ವೃತ್ತಿಯಲ್ಲಿ ಟೈಲರ್ ಕೆಲಸ ಮಾಡುತ್ತಾರೆ. ಪಂಕಜಾ ಎನ್ನುವವರ ಬಗ್ಗೆ ನನಗೆ ಗೊತ್ತಿಲ್ಲ. 2ನೇ ಆರೋಪಿಯ ಪರಿಚಯ ನನಗೆ ಇರುವುದಿಲ್ಲ. ನಾನು ಅವರನ್ನು ಯಾವತ್ತೂ ನೋಡಿಲ್ಲ. 1ನೇ ಆರೋಪಿಯ ಪರಿಚಯವೂ ನನಗೆ ಇರುವುದಿಲ್ಲ. 1ನೇ ಆರೋಪಿಯು ಯಾವುದೇ ಹುಡುಗಿಯನ್ನು 2ನೇ ಆರೋಪಿಯ ಮನೆಗೆ ಕರೆದುಕೊಂಡು ಬಂದಿರುವುದನ್ನು ನಾನು ನೋಡಿರುವುದಿಲ್ಲ. ಪ್ರಕರಣ ಸಂಬಂಧ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ಈ ಸಂಬಂಧ ಪೊಲೀಸರಿಗೆ ನಾನು ಯಾವುದೇ ಹೇಳಿಕೆಯನ್ನು ಸಹ ನೀಡಿರುವುದಿಲ್ಲ.

(ಈ ಸಂದರ್ಭದಲ್ಲಿ ಮಾನ್ಯ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರಿರುತ್ತಾರೆ, ದಾಖಲೆಗಳನ್ನು ಪರಿಶೀಲಿಸಿ, ಪಾಟೀಸವಾಲಿಗೆ ಅನುಮತಿ ನೀಡಿದೆ)

**ಪಾಟೀಸವಾಲುಃ ಸರ್ಕಾರಿ ಅಭಿಯೋಜಕರಿಂದಃ**

2. ದಿಃ 26.08.2023 ರಂದು ನಾನು ಪೊಲೀಸರಿಗೆ ನೀಡಿದ ಹೇಳಿಕೆಯಲ್ಲಿ "ನನ್ನ ಮನೆಯ ಪಕ್ಕದ ವಾಸಿ ಲೋಕೇಶ್ ರವರ ಮನೆ ಇದ್ದು, ----------------------------------

--------------------------------------------------------------------------------

--------------------------------------------------------------------------------

------------------------------------ ದಾಖಲಿಸಿರುವ ವಿಚಾರ ನನಗೆ ತಿಳಿದಿರುತ್ತೆ" ಎಂಬುದಾಗಿ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಗೆ ಸದರಿ ಹೇಳಿಕೆ ಭಾಗವನ್ನು ಓದಿ ಹೇಳಲಾಗಿ ಸಾಕ್ಷಿಯು ಅದನ್ನು ಅಲ್ಲಗಳೆದಿರುತ್ತಾರೆ. ಸದರಿ ಹೇಳಿಕೆಯ ಭಾಗವನ್ನು ನಿಪಿ-11 ಎಂದು ಗುರುತಿಸಲಾಯಿತು. ನಾನು ನಿಪಿ-11 ರಂತೆ ಆರೋಪಿತರ ವಿರುದ್ಧ ಹೇಳಿಕೆಯನ್ನು ನೀಡಿದ್ದರೂ ಸಹ, ಪ್ರಕರಣ ಸಂಬಂಧ ಎಲ್ಲಾ ಮಾಹಿತಿ ಇದ್ದರೂ ಸಹ ಹಾಗೂ 2ನೇ ಆರೋಪಿ ನಮ್ಮ ಪಕ್ಕದ ಮನೆಯವರಾಗಿರುವುದರಿಂದ, ಅವರುಗಳಿಗೆ ಸಹಾಯ ಮಾಡಲೆಂದು ನ್ಯಾಯಾಲಯದ ಮುಂದೆ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀಸವಾಲುಃ ಆಪಾದಿತರ ಪರ ಶ್ರೀ ವಿ.ಎಂ ವಕೀಲರಿಂದಃ</u>**

ಆರೋಪಿಗಳ ಪರ ಯಾವುದೇ ಪಾಟೀಸವಾಲು ಇಲ್ಲ ಎಂದು ಹೇಳಿರುತ್ತಾರೆ.

**<u>ಮರು ವಿಚಾರಣೆಃ</u>** ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಸಾಕ್ಷ್ಯವನ್ನು ನನ್ನ ಸಮಕ್ಷಮ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇದೆ

3ನೇ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು,
ಹಾಸನ.